ವಿಜಯ ಕರ್ನಾಟಕ

# ಈಜು: ಹೇಮಂತ್‌ಗೆ ಚಿನ್ನ

■ **ವಿಕ ಸುದ್ದಿಲೋಕ** ಬೆಂಗಳೂರು

ಬೆಂಗಳೂರಿನ ಉದಯೋನ್ಮುಖ ಯುವ ಈಜುಪಟು ಹೇಮಂತ್ ಜೇನುಕಲ್, ಇತ್ತೀಚೆಗೆ ದಿಲ್ಲಿಯಲ್ಲಿ ನಡೆದ 63ನೇ ರಾಷ್ಟ್ರೀಯ ಶಾಲಾ ಕ್ರೀಡಾಕೂಟದ ಈಜು ಸ್ಪರ್ಧೆಯಲ್ಲಿ ತಲಾ ಒಂದು ಚಿನ್ನ ಹಾಗೂ ಬೆಳ್ಳಿ ಪದಕ ಗೆದ್ದಿದ್ದಾರೆ.

ಬಾಲಕರ 4x100 ಮೀ. ಫ್ರೀಸ್ಟೈಲ್ ರಿಲೇ ವಿಭಾಗದಲ್ಲಿ ಚಿನ್ನ ಗೆದ್ದಿರುವ ಹೇಮಂತ್, 400 ಮೀ. ವೈಯಕ್ತಿಕ ಮೆಡ್ಲೇ ವಿಭಾಗದಲ್ಲಿ ಬೆಳ್ಳಿ ಪದಕ ತಮ್ಮದಾಗಿಸಿಕೊಂಡಿದ್ದಾರೆ. ಹೇಮಂತ್, ನಗರದ ವಿವಿ ಪುರಂನಲ್ಲಿರುವ ಜೈನ್ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ಓದುತ್ತಿದ್ದಾರೆ. ಅಲ್ಲದೆ 100 ಮೀ. ಬಟರ್ ಫ್ಲೈ ವಿಭಾಗದಲ್ಲಿ ಪ್ರಸಿದ್ಧ್ ಕೃಷ್ಣ ಬೆಳ್ಳಿ ಪದಕದ ಸಾಧನೆ ಮಾಡಿದ್ದಾರೆ.

ಇದೇ ವೇಳೆ ಹರ್ಷಿತಾ ಜಯರಾಮ್, ಬಾಲಕಿಯರ 50 ಮೀ. ಬ್ರೆಸ್ಟ್ ಸ್ಟ್ರೋಕ್ ವಿಭಾಗದಲ್ಲಿ ಬೆಳ್ಳಿ ಹಾಗೂ 200 ಮೀ. ಬ್ರೆಸ್ಟ್ ಸ್ಟ್ರೋಕ್ ವಿಭಾಗದಲ್ಲಿ ಕಂಚಿನ ಪದಕ ಗೆದ್ದಿದ್ದಾರೆ. ಈ ಮೂವರೂ ಗ್ಲೋಬಲ್ ಈಜು ಕೇಂದ್ರದಲ್ಲಿ ಕೋಚ್‌ಗಳಾದ ಜಯರಾಮ್ ಎ.ಸಿ ಮತ್ತು ಜಗನ್ನಾಥನ್ ಅವರಿಂದ ತರಬೇತಿ ಪಡೆಯುತ್ತಿದ್ದಾರೆ.

